<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.134/2022</u>

ದಿಃ 04.01.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-8 Pw-7

| | | |
|---|---|---|
| ಹೆಸರು | ಃ | ಸುಮಾಬಾಯಿ |
| ತಂದೆಯ/ಗಂಡನ ಹೆಸರು | ಃ | ರಾಮಕೃಷ್ಣ |
| ವಯಸ್ಸು | ಃ | 29 ವರ್ಷ |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ವಿರುಪಸಂದ್ರ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ಈಗ ಸುಮಾರು ಒಂದು ವರ್ಷದ ಹಿಂದೆ ಪೊಲಿಸೀರು ಸಾತನೂರು ಪೊಲೀಸ್ ಠಾಣೆಯಲ್ಲಿ ಒಂದು ದಸ್ತಾವೇಜಿನ ಮೇಲೆ ನನ್ನ ಸಹಿ ಪಡೆದಿರುತ್ತಾರೆ.

2. ಸದರಿ ದಸ್ತಾವೇಜನ್ನು ನೋಡಿ ಗುರುತಿಸುತ್ತಿದ್ದು ಅದನ್ನು ಈಗಾಗಲೇ ನಿಪಿಃ4 ಎಂದು ಗುರುತಿಸಲಾಗಿದ್ದು ಅದರ ಮೇಲಿರುವ ನನ್ನ ಸಹಿಯನ್ನು ಈಗ ನಿಪಿಃ4 ಸಿ ಎಂದು ಗುರುತಿಸಲಾಯಿತು.

3. ನಿಪಿಃ4 ರಲ್ಲಿ ಏನು ಬರೆದಿದೆ ಎಂದು ನನಗೆ ಮಾಹಿತಿ ಇರುವುದಿಲ್ಲ.

4. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಸ್ಥಳ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

5. ನಂತರ ನಮ್ಮ ಮನೆಯ ಬಳಿ ಬಂದು ಒಂದು ವರ್ಣ ರಂಜಿತ ಛಾಯಾಚಿತ್ರವನ್ನು ಪೊಲೀಸರು ತೆಗೆಸಿದ್ದು ಅದನ್ನು ಈಗ ನೋಡಿ ಗುರುತಿಸುತ್ತಿದ್ದು ಅದನ್ನು ಈಗಾಗಲೇ ನಿಪಿಃ5 ಎಂದು ಗುರುತಿಸಿದ್ದು ಇರುತ್ತದೆ.

6. ನಿಪಿಃ 5 ನ್ನು ಪೊಲೀಸರು ಯಾವ ಕಾರಣಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

7. ಈಗ ನನಗೆ ಓದಿ ಹೇಳಿದ ನಿ.ಪಿ.ರಂತೆ ರಂತೆ ದಿಃ 07.06.2022 ರಂದು ಬೆಃ 10 ರಿಂದ 10.45 ರ ವರೆಗೆ ಚಾಸಾಃ 1 ಇವಳ ತೋರಿಕೆ ಮೇರೆಗೆ ಅವಳ ಮನೆಯ ಹತ್ತಿರ ಪೊಲಿಸರು ಘಟನಾ ಸ್ಥಳವೆಂದು ನಮ್ಮ ಸಮಕ್ಷಮದಲ್ಲಿ ಭೇಟಿ ನೀಡಿ ಒಂದು ಸ್ಥಳಪಂಚನೆಮಯನ್ನು ಮಾಡಿ ಈಗ ತೋರಿಸಿದ ಮುಮಾಃ1 ನ್ನು ಅಮಾನತ್ತುಪಡಿಸಿಕೊಂಡು ನಂತರ ಸದರಿ ಪಂಚನಾಮೆಯ ಮೇಲೆ ನಮ್ಮ ಸಹಿ ಪಡೆದಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

8. ನಿಪಿಃ 4 ರಸಮಯದಲ್ಲಿಯೇ ಅದಕ್ಕೆ ಸಂಬಂಧಿಸಿದಂತೆಯೇ ಪೊಲೀಸರು ಒಂದು ವರ್ಣ ರಂಜಿತಾ ಛಾಯಚಿತ್ರವನ್ನು ತೆಗೆಸಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

9. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ.ಎಂ ಕೆ ಎನ್ ಮತ್ತು ಎಸ್ ಎನ್., ವಕೀಲರಿಂದ ಆರೋಪಿಗಳ ಪರವಾಗಿಃ ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.